ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಗುಂಡ್ಲುಪೇಟೆ

# ಸಿ.ಸಿ. ಸಂಖ್ಯೆ: 1041/2025

ಫ್ರಾಸಾ – 8

ಚಾಸಾ – 8

**ಸಾಕ್ಷಿಯು ದಿಃ 25.02.2026 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

| | | |
|---|---|---|
| ಹೆಸರು | : | ಮಹೇಶ |
| ತಂದೆಯ ಹೆಸರು | : | ಮಾದಶೆಟ್ಟಿ |
| ವಯಸ್ಸು | : | 49 ವರ್ಷ |
| ವೃತ್ತಿ | : | ಹೆಚ್.ಸಿ |
| ವಾಸಸ್ಥಳ | : | ಗುಂಡ್ಲುಪೇಟೆ |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿ ರವರಿಂದ :–**

ಜೂನ್ 2017 ರಿಂದ ಜುಲೈ 2023 ರವರೆಗೆ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 05.09.2022 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಮಧ್ಯಾಹ್ನ 12.30 ಗಂಟೆ ಸಮಯದಲ್ಲಿ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಠಾ.ಮೊ. ಸಂಖ್ಯೆ 243/2022 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ ಎಂದು ಸಾಕ್ಷಿಯು ನಿಪಿ 1 ದೂರಿನಲ್ಲಿ ತಮ್ಮ ಸಹಿ ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 1(ಎ) ಎಂದು ಗುರ್ತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 6 ಎಂದು ಗುರ್ತಿಸಲಾಯಿತು.

3. ಅದೇ ದಿನ ಚಾಸಾ 1 ರವರು ತೋರಿಸಿದ ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಚಾಸಾ 3 ಮತ್ತು 4 ರವರನ್ನು ಬರಮಾಡಿಕೊಂಡಿ ವಿಷಯ ತಿಳಿಸಿ ಅವರು ಒಪ್ಪಿದ ಮೇರೆಗೆ ಮಧ್ಯಾಹ್ನ 12.15 ರಿಂದ 01.00 ಗಂಟೆಯವರೆಗೆ ಪಂಚನಾಮೆ ಸಾಕ್ಷಿಗಳ ಸಮಕ್ಷಮ ಸ್ಥಳ ಪಂಚನಾಮೆ ಕ್ರಮ ಜರುಗಿಸಿ, ಸ್ಥಳದಲ್ಲಿ ಚಾಸಾ 1 ರವರು ಹಾಜರುಪಡಿಸಿದ ದೊಣ್ಣೆ ಮತ್ತು ಕಲ್ಲನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ ಎಂದು ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ದೊಣ್ಣೆ ಮತ್ತು ಕಲ್ಲನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಮುದ್ದೆ ಮಾಲು 1 ಮತ್ತು 2 ಎಂದು ಗುರ್ತಿಸಲಾಯಿತು. ಅದೇ ದಿನ ನಂತರ ಠಾಣೆಗೆ ಬಂದು ದೊಣ್ಣೆ ಮತ್ತು ಕಲ್ಲನ್ನು ಠಾಣಾ ಮಾಲುಪಟ್ಟಿಯಲ್ಲಿ ಅಳವಡಿಸಿಕೊಂಡಿರುತ್ತೇನೆ ಎಂದು ಸಾಕ್ಷಿಯು ನಿಪಿ 2 ಪಂಚನಾಮೆಯಲ್ಲಿ ತಮ್ಮ ಸಹಿ ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 2(ಎ) ಎಂದು ಗುರ್ತಿಸಲಾಯಿತು. ಅದೇ ದಿನ ಚಾಸಾ 3 ಮತ್ತು 4 ರವರ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ.

4. ದಿಃ 09.09.2022 ರಂದು ಆರೋಪಿಗಳಿಗೆ ಕಲಂ 41(ಎ) ದಂಡ ಪ್ರಕ್ರೀಯ ಸಂಹಿತೆಯಡಿ ನೋಟೀಸ್ ಜಾರಿ ಮಾಡಿ, ಜಾಮೀನಿನ ಮೇರೆಗೆ ಬಿಟ್ಟಿರುತ್ತೇನೆ ಎಂದು 2ನೇ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. 1ನೇ ಆರೋಪಿ ಗೈರು ಹಾಜರಿದ್ದು ಗುರ್ತಿಸುವಿಕೆಯ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದ ಕಾರಣ ವಿನಾಯಿತಿ ಅರ್ಜಿಯನ್ನು ಪುರಸ್ಕರಿಸಲಾಯಿತು. ದಿಃ 07.10.2022 ರಂದು ಚಾಸಾ 2 ರವರ ಗಾಯದ ಪ್ರಮಾಣ ಪತ್ರವನ್ನು ನಿಪಿ 5 ರಂತೆ ಪಡೆದಿರುತ್ತೇನೆ ಎಂದು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ತನಿಖೆ ಪೂರ್ಣಗೊಂಡಿದ್ದು ಆರೋಪಿಗಳ ವಿರುದ್ಧ ಆರೋಪ ಸಾಬಿತಾದ್ದರಿಂದ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ.

**ಪಾಟೀ ಸವಾಲು :- ಆರೋಪಿಗಳ ಪರ ವಕೀಲರಿಂದ**

ದೂರನ್ನು ಯಾರು ಗಣಕೀಕರಣ ಮಾಡಿದರು ಎಂದು ದೂರುದಾರರನ್ನು ವಿಚಾರಿಸಿಲ್ಲ. ಪಂಚನಾಮೆ ಸಾಕ್ಷಿಗಳಿಗೆ ಲಿಖಿತ ನೋಟೀಸ್ ನೀಡಿಲ್ಲ. ಪಂಚನಾಮೆ ಸಾಕ್ಷಿಗಳನ್ನು ನಾನೇ ಊರಿನಲ್ಲಿ ಕರೆದುಕೊಂಡಿರುತ್ತೇನೆ. ಮುದ್ದೆ ಮಾಲುಗಳನ್ನು ಚಾಸಾ 1

ರವರು ನನಗೆ ನೀಡಿರುತ್ತಾರೆ. ನಾನು ಸ್ಥಳ ಪಂಚನಾಮೆ ಮಾಡಿ ಸಾಕ್ಷಿಗಳ ಸಮಕ್ಷಮ ಸ್ಥಳ ಪಂಚನಾಮೆ ಜರುಗಿಸಿ ಮುದ್ದೆ ಮಾಲುಗಳನ್ನು ವಶಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಗಾಯದ ಪ್ರಮಾಣ ಪತ್ರವನ್ನು ಕೇಸಿಗೆ ಪೂರಕವಾಗಿ ಸೃಷ್ಟಿಸಿ ಹಾಜರುಪಡಿಸಲಾಗಿದೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ದಾಖಲಿಸಿಲ್ಲ ಎಂದರೆ ಸರಿಯಲ್ಲ. ಆರೋಪಿಗಳಿಗೆ ಯಾವುದೇ ನೋಟೀಸ್ ನೀಡಿಲ್ಲ ಎಂದರೆ ಸರಿಯಲ್ಲ. ಆರೋಪಿಗಳ ವಿರುದ್ಧ ಆರೋಪ ಸಾಬಿತಾಗದೇ ಇದ್ದರೂ ಸಹ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ